# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 488
ಉತ್ತರಿಸಬೇಕಾದ ದಿನಾಂಕ : 08.12.2023
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಯುವಕರನ್ನು ಪ್ರೋತ್ಸಾಹಿಸಲು ಯುವಜನ ಮೇಳ ಮಾಡಲು ಸರ್ಕಾರ ಜಿಲ್ಲೆಗೆ ಅನುದಾನ ಬಿಡುಗಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಎಷ್ಟು ಅನುದಾನ ನೀಡಲಾಗಿದೆ: (ವಿವರ ನೀಡುವುದು) | ರಾಜ್ಯದ ಯುವಕರನ್ನು ಪ್ರೋತ್ಸಾಹಿಸಲು ರಾಜ್ಯ ಮಟ್ಟದ ಯುವಜನ ಮೇಳ ಕಾರ್ಯಕ್ರಮವನ್ನು ಬೀದರ್ ಜಿಲ್ಲೆಯಲ್ಲಿ ಸಂಘಟನೆ ಮಾಡಲು ಕಳೆದ 2018-19ನೇ ಸಾಲಿನಲ್ಲಿ ರೂ.60.00 ಲಕ್ಷಗಳ ಅನುದಾನವನ್ನು ಬಸವ ಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಲಾಗಿರುತ್ತದೆ.<br><br>ಪ್ರಸ್ತುತ, 2023-24ನೇ ಸಾಲಿನಲ್ಲಿ ಬೀದರ್ ಜಿಲ್ಲಾ ಪಂಚಾಯತ್ ಕ್ರಿಯಾ ಯೋಜನೆಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ. ರಾಜ್ಯ ವಲಯದಿಂದ 2023-24ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಮತ್ತು ರಾಜ್ಯಮಟ್ಟದ ಕಾರ್ಯಕ್ರಮಕ್ಕೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. |
| ಆ) | ಈ ಅನುದಾನವನ್ನು ಜಿಲ್ಲಾ ಉತ್ಸವಕ್ಕೆ ಉಪಯೋಗ ಮಾಡಿಕೊಳ್ಳಬಹುದೇ; ಹಾಗಿದ್ದಲ್ಲಿ ಯಾವ ನಿಯಮದಡಿಯಲ್ಲಿ ಮಾಡಿಕೊಳ್ಳಬಹುದು: | ಇಲಾಖೆಯ ಯುವಜನ ಮೇಳ ಕಾರ್ಯಕ್ರಮ ಸಂಘಟನೆ ಮಾಡಲು ಬಿಡುಗಡೆ ಮಾಡಿದ ಅನುದಾನವನ್ನು ಅದೇ ಉದ್ದೇಶಕ್ಕೆ ಬಳಸಿಕೊಳ್ಳಬೇಕಾಗಿರುತ್ತದೆ ಮತ್ತು ಇತರೆ ಕಾರ್ಯಕ್ರಮಗಳಿಗೆ ಬಳಸಲು ಅವಕಾಶ ಇರುವುದಿಲ್ಲ. |
| ಇ) | ಯುವಜನ ಮೇಳ ನಡೆಸುವುದು ಜಿಲ್ಲಾಡಳಿತವೇ: ಇದರಲ್ಲಿ ಜನ ಪ್ರತಿನಿಧಿಗಳಿಗೆ ಅಧಿಕಾರವಿಲ್ಲವೇ; ಇಲ್ಲದಿದ್ದಲ್ಲಿ, ಈ ಯೋಜನಾ ಉತ್ಸವ ಮಾಡುವ ಸಮಿತಿ ಯಾವುದು? (ಸಮಿತಿಯಲ್ಲಿ ಇರುವವರ ಮಾಹಿತಿ ನೀಡುವುದು) | ಯುವಜನ ಮೇಳವನ್ನು ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅನುದಾನ ಲಭ್ಯತೆಯ ಮೇರೆಗೆ ಜಿಲ್ಲಾ ಮತ್ತು ರಾಜ್ಯ ಮಟ್ಟಗಳಲ್ಲಿ ಆಯೋಜಿಸಲಾಗುತ್ತದೆ. ಆಯಾ ಜಿಲ್ಲೆಯ ಜಿಲ್ಲಾಡಳಿತದ ಸಹಮತಿಯೊಂದಿಗೆ ಶಿಷ್ಟಾಚಾರದನ್ವಯ ಜನಪ್ರತಿನಿಧಿಗಳ ಮತ್ತು ಸ್ಥಳೀಯ ಸಂಘ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಆಯೋಜನೆ ಮಾಡಲಾಗುತ್ತದೆ. ಈ ಯುವಜನ ಮೇಳ ಕಾರ್ಯಕ್ರಮ ಸಂಘಟನೆ ಮಾಡಲು ಪ್ರತ್ಯೇಕ ಸಮಿತಿ ಇರುವುದಿಲ್ಲ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/83/2023**

**( ಬಿ. ನಾಗೇಂದ್ರ )**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.